ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 24 ನೇ ಮಾರ್ಚ್, 2020

ಕಿನ್ನಿಗೋಳಿ ಗ್ರಾಮಪಂಚಾಯಿತಿಯನ್ನು ನಗರ ಪಂಚಾಯತ್‌ನ್ನಾಗಿ ಮಾಡುವ ಕುರಿತು

ಶ್ರೀ ಐವನ್ ಡಿ'ಸೋಜಾ(ನಾಮನಿರ್ದೇಶನ ಹೊಂದಿದವರು):-

1523 (1792) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ದಕ್ಷಿಣ ಕನ್ನಡ ಜಿಲ್ಲೆಯ ಕಿನ್ನಿಗೋಳಿ ಗ್ರಾಮ ಪಂಚಾಯ್ತಿಯನ್ನು ನಗರ ಪಂಚಾಯ್ತಿಯನ್ನಾಗಿ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; (ವಿವರ ನೀಡುವುದು)

(ಆ) ಕಿನ್ನಿಗೋಳಿ ಗ್ರಾಮ ಪಂಚಾಯತ್ ವ್ಯಾಪ್ತಿಯ ಜನಸಂಖ್ಯೆ ಎಷ್ಟು; ಮತ್ತು ಭೌಗೋಳಿಕ ವಿಸ್ತೀರ್ಣ ಎಷ್ಟು; (ವಿವರ ನೀಡುವುದು)

(ಇ) ಕಿನ್ನಿಗೋಳಿ ಗ್ರಾಮ ಪಂಚಾಯತ್‌ನ್ನು ನಗರ ಪಂಚಾಯತ್ ಆಗಿ ಪರಿವರ್ತನೆ ಮಾಡಲು ಗ್ರಾಮ ಪಂಚಾಯತ್‌ಯಿಂದ ಬೇಡಿಕೆ ಬಂದಿದೆಯೇ; ಬಂದಿದ್ದಲ್ಲಿ, ಅದರ ವಿವರ ನೀಡುವುದು; ಗ್ರಾಮ ಪಂಚಾಯತ್‌ಗಿರುವ ಆದಾಯ ಎಷ್ಟು;

(ಈ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಎಷ್ಟು ಗ್ರಾಮ ಪಂಚಾಯತ್‌ಗಳನ್ನು ನಗರ ಪಂಚಾಯತ್‌ಗಳು/ಪುರಸಭೆ/ನಗರಸಭೆ ಮಾಡಲು ಸರ್ಕಾರದ ಮುಂದೆ ಪ್ರಸ್ತಾವನೆ ಇದೆಯೇ ? (ವಿವರ ನೀಡುವುದು)